O.S.No.:100/2024
P.W.:1

ಈ ದಿನ ದಿಃ26.06.2025 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನವನ್ನು ಬೋಧಿಸಲಾಯಿತು.

**ಮುಖ್ಯ ವಿಚಾರಣೆಃ ವಾದಿ ಪರ ವಕೀಲರಾದ ಶ್ರೀ ಎಸ್.ಡಿ.ಎಂ ರವರಿಂದಃ-**

ನಾನು ಈ ದಾವೆಯಲ್ಲಿ 1ನೇ ವಾದಿ ಇದ್ದು, ನನ್ನ ಮುಖ್ಯ ವಿಚಾರಣೆಯ ಬದಲಾಗಿ ನಾನು ನನ್ನ ಪ್ರಮಾಣಪತ್ರವನ್ನು ಸಲ್ಲಿಸಿರುತ್ತೇನೆ. ಅದರಲ್ಲಿರುವ ಎಲ್ಲಾ ವಿಷಯಗಳನ್ನು ನಾನು ನನ್ನ ವಕೀಲರಿಗೆ ಹೇಳಿ, ಬರೆಯಿಸಿ, ಓದಿಸಿ ತಿಳಿದುಕೊಂಡು ಮನಗೊಂಡ ನಂತರ ಸಹಿ ಮಾಡಿರುತ್ತೇನೆ. ನನ್ನ ಪ್ರಮಾಣಪತ್ರದಲ್ಲಿರುವ ಎಲ್ಲಾ ವಿಷಯಗಳು ನಿಜ ಮತ್ತು ಸತ್ಯಸಂಗತಿಗಳಾಗಿರುತ್ತವೆ.

ಚಾಪಕಾಗದದ ಮೇಲೆ ನಾನು ದೃಢೀಕರಿಸಿ ಪ್ರಮಾಣೀಕರಿಸಿರುವ ನಮ್ಮ ಕುಟುಂಬದ ವಂಶವೃಕ್ಷವನ್ನು ಹಾಜರುಪಡಿಸಿದ್ದೇನೆ. ಅದನ್ನು ನಿಪಿ-1 ಎಂದು ಗುರುತಿಸಲಾಯಿತು.

ಪಟ್ಟಾ ಮತ್ತು ರಶೀದಿ ಪುಸ್ತಕವನ್ನು ಹಾಜರುಪಡಿಸಿದ್ದೇನೆ. ಅದನ್ನು ನಿಪಿ-2 ಎಂದು ಗುರುತಿಸಲಾಯಿತು.

ತೆರಿಗೆ ಪಾವತಿಸಿದ ಕಂದಾಯದ ರಶೀದಿಯನ್ನು ಹಾಜರು ಪಡಿಸಿರುತ್ತೇನೆ. ಅದನ್ನು ನಿಪಿ-3 ಎಂದು ಗುರುತಿಸಲಾಯಿತು.

ಭೂಮಾಪಕರು ನೀಡಿದ ಎರಡು ನೋಟಸ್ ಗಳನ್ನು ಹಾಜರು ಪಡಿಸಿರುತ್ತೇನೆ. ಅವುಗಳನ್ನು ಕ್ರಮವಾಗಿ ನಿಪಿ-4 ಮತ್ತು ನಿಪಿ-5 ಎಂದು ಗುರುತಿಸಲಾಯಿತು.

O.S.No.:100/2024
P.W.:1

ದಿನಾಂಕ.05.09.2023ರಂದು ಠಾಣಾದಿಕಾರಿಗಳು ಸಾತನೂರು ಪೊಲೀಸ್ ಠಾಣೆ ರವರು ನೀಡಿದ ಒಂದು ಹಿಂಬರಹವನ್ನು ಹಾಜರುಪಡಿಸಿದ್ದೇನೆ. ಅದನ್ನು ನಿಪಿ-6 ಎಂದು ಗುರುತಿಸಲಾಯಿತು.

ವಾದಿ ಪರ ವಕೀಲರು ಮುಂದುವರೆದ ಮುಖ್ಯವಿಚಾರಣೆಗೆ ಕಾಲಾವಕಾಶ ಕೇಳಿದ್ದು, ಆಲಿಸಿ ಕಾಲಾವಕಾಶ ನೀಡಲಾಯಿತು.

(ಸಾಕ್ಷಿಯನ್ನು ತೆರೆದ ನ್ಯಾಯಾಲಯದಲ್ಲಿ ನನ್ನ ಉಖ್ತ ಲೇಖನದ ಮೇರೆಗೆ ಬೆರಳಚ್ಚು ಮಾಡಲಾಯಿತು)

**ಓ ಹೇ ಕೇ ಸರಿ ಇದೆ,**

**(ರಾಧ.ಎಸ್)**
**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು**
**ಜೆ.ಎಂ.ಎಫ್.ಸಿ, ಕನಕಪುರ.**